ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 16 ಟಿಇಸಿ 2018.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ, 2ನೇ ಗೇಟ್, 6ನೇ ಮಹಡಿ,
ಬೆಂಗಳೂರು, ದಿನಾಂಕ: 09-03-2018.

**ಸು ತ್ತೋ ಲೆ**

ವಿಷಯ:- ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸೀಟು ಹಂಚಿಕೆ ಮಾಡಲ್ಪಟ್ಟ ಅಭ್ಯರ್ಥಿಗಳ ಪ್ರವೇಶಾತಿಯನ್ನು ನಿರಾಕರಿಸದಿರುವ ಬಗ್ಗೆ.

The Karnataka Selection of Candidates for Admission to Government Seats in Professional Educational Institutions Rules, 2006 ಅಡಿಯಲ್ಲಿ ವೃತ್ತಿಪರ ಶಿಕ್ಷಣ ಕೋರ್ಸುಗಳಾದ ವೈದ್ಯಕೀಯ, ದಂತ ವೈದ್ಯಕೀಯ, ಇಂಜಿನಿಯರಿಂಗ್, ಪಶು ವೈದ್ಯಕೀಯ, ಆಯುಷ್ ಮತ್ತು ಇತರೆ ಕೋರ್ಸುಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಅಭ್ಯರ್ಥಿಗಳಿಗೆ ಸೀಟು ಹಂಚಿಕೆ ಮಾಡುತ್ತದೆ. ಈ ಸೀಟು ಹಂಚಿಕೆಯನ್ನು ಅಭ್ಯರ್ಥಿಗಳು ಅಭಿಮತ ವ್ಯಕ್ತಪಡಿಸಿದ ನಂತರ ವಿವಿಧ ಸುತ್ತುಗಳಲ್ಲಿ ಮಾಡಲಾಗುತ್ತದೆ.

2) ವಿವಿಧ ವೃತ್ತಿಪರ ಕೋರ್ಸುಗಳಿಗೆ ಏಕ ಕಾಲದಲ್ಲಿ ಪ್ರವೇಶಾತಿ ಪ್ರಕ್ರಿಯೆಗಳನ್ನು ಪೂರೈಸಲು ಸಾಧ್ಯವಾಗದ ಕಾರಣ, ಒಂದನೇ ಸುತ್ತಿನಲ್ಲಿ ಆಯ್ಕೆ ಮಾಡಿಕೊಂಡ ಸೀಟು / ಕೋರ್ಸಿಗೆ ಅಭ್ಯರ್ಥಿಯು ಸಂಬಂಧಪಟ್ಟ ಕಾಲೇಜು / ಸಂಸ್ಥೆಗಳಲ್ಲಿ ಪ್ರವೇಶಾತಿ ಹೊಂದಿ ನಿಗಧಿಪಡಿಸಿದ ಬೋಧನಾ ಶುಲ್ಕ ಮತ್ತು ವಿದ್ಯಾರ್ಹತೆಗೆ ಸಂಬಂಧಿಸಿದ ಮೂಲ ದಾಖಲೆಗಳನ್ನು ನೀಡಿರುತ್ತಾನೆ. ಇದಾದ ನಂತರ, ಎರಡನೇ ಸುತ್ತಿನಲ್ಲಿ ಮತ್ತೊಂದು ಸೀಟು / ಕೋರ್ಸಿಗೆ ಇದೇ ಅಭ್ಯರ್ಥಿಯು ಅಭಿಮತವನ್ನು ಚಲಾಯಿಸಿ ಸೀಟು ಹಂಚಿಕೆಗೊಂಡಾಗ ಮೊದಲಿನ ಕಾಲೇಜು / ಸಂಸ್ಥೆಗೆ ನೀಡಿರುವ ಮೂಲ ದಾಖಲೆಗಳನ್ನು ಹಿಂದಿರುಗಿಸದೇ ಅನೇಕ ಸಂಸ್ಥೆಗಳು ಸತಾಯಿಸುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬರುತ್ತಿರುತ್ತವೆ. ಇದರ ಜೊತೆಗೆ ಪ್ರಾಧಿಕಾರದಿಂದ ಸೀಟು ಹಂಚಿಕೆಗೊಂಡ ಅಭ್ಯರ್ಥಿಗಳಿಗೆ ಕೆಳಕಂಡ ಕಾರಣಗಳಿಂದಾಗಿ ಕೆಲವು ಕಾಲೇಜು / ಸಂಸ್ಥೆಗಳು ಪ್ರವೇಶಾತಿಯನ್ನು ನಿರಾಕರಿಸುತ್ತಿರುವ ಪ್ರಕರಣಗಳು ಸಹ ಸರ್ಕಾರದ ಗಮನಕ್ಕೆ ಬಂದಿರುತ್ತದೆ.

1. ನಿರೀಕ್ಷಿತ ಪ್ರಮಾಣದಲ್ಲಿ ಅಭ್ಯರ್ಥಿಗಳ ಪ್ರವೇಶಾತಿ ಪಡೆದಿರುವುದಿಲ್ಲ ಎಂಬ ಕಾರಣದಿಂದ ಪ್ರವೇಶಾತಿಯನ್ನು ನಿರಾಕರಿಸುವುದು.
2. ಪ್ರಾಧಿಕಾರದಿಂದ ಸೀಟು ಹಂಚಿಕೆಗೊಂಡ ನಂತರ ಸಂಬಂಧಪಟ್ಟ ಕೋರ್ಸುಗಳನ್ನು ಮುಚ್ಚಲಾಗಿದೆ ಎಂದು;
3. ಪ್ರಾಧಿಕಾರದಿಂದ ಸೀಟು ಹಂಚಿಕೆಯ ಸಂಧರ್ಭದಲ್ಲಿ ಸರ್ಕಾರವು ನಿಗಧಿಪಡಿಸಿರುವ ಶುಲ್ಕ ಪಾವತಿಸಿದ ನಂತರವೂ, ಹೆಚ್ಚುವರಿ ಶುಲ್ಕವನ್ನು ಪಾವತಿಸುವಂತೆ ಒತ್ತಾಯಿಸುವುದು.

ಪುಟ 2 ಕ್ಕೆ

3) ಕೆಳಕಂಡ ಸ್ಪಷ್ಟೀಕರಣದ ಹಿನ್ನೆಲೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಸರ್ಕಾರಿ ಕೋಟಾದ ಸೀಟುಗಳಿಗೆ ಹಂಚಿಕೆಗೊಂಡ ಅಭ್ಯರ್ಥಿಗಳಿಗೆ ಯಾವುದೇ ಕಾರಣದಿಂದಲೂ ಪ್ರವೇಶಾತಿಯನ್ನು ನಿರಾಕರಿಸದಿರುವಂತೆ ಎಲ್ಲಾ ವೃತ್ತಿಪರ ಶಿಕ್ಷಣ ಸಂಸ್ಥೆಗಳಿಗೆ ಸರ್ಕಾರವು ಕಟ್ಟುನಿಟ್ಟಾಗಿ ಸೂಚಿಸಿದೆ.

- ಎಐಸಿಟಿಇ, ನವದೆಹಲಿ ಇವರಿಂದ ಅನುಮೋದಿತಗೊಂಡ ಕೋರ್ಸು ಮತ್ತು ಪ್ರವೇಶಾತಿಯ ಮಿತಿಯನ್ನು ಆಧರಿಸಿ ಸೀಟ್ ಮ್ಯಾಟ್ರಿಕ್ಸ್ ಸೀಟುಗಳನ್ನು ಅಳವಡಿಸಿ ಹೊರಡಿಸುವ ಕಾರಣ, ಅಂತಹ ಕೋರ್ಸು ಮತ್ತು ಸೀಟುಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಹಂಚಿಕೆಗೊಂಡ ಅಭ್ಯರ್ಥಿಗಳ ಪ್ರವೇಶಾತಿಯನ್ನು ವೃತ್ತಿಪರ ಶಿಕ್ಷಣ ಸಂಸ್ಥೆಗಳು ಯಾವುದೇ ಕಾರಣದಿಂದಲೂ ನಿರಾಕರಿಸುವಂತಿಲ್ಲ. ಒಂದು ವೇಳೆ ನಿರಾಕರಿಸಿದ್ದಲ್ಲಿ, ಅಂತಹ ಶಿಕ್ಷಣ ಸಂಸ್ಥೆಯ ಯಾವುದೇ ಕೋರ್ಸಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಸೀಟು ಹಂಚಿಕೆ ಪ್ರಕ್ರಿಯೆಯನ್ನು ಅನಿರ್ದಿಷ್ಟ ಕಾಲಾವಧಿಯವರೆಗೆ ತಡೆಹಿಡಿಯಲು ಕ್ರಮವಹಿಸಲಾಗುವುದು.
- ಯಾವುದೇ ಅಭ್ಯರ್ಥಿಯು ಯಾವುದೇ ಕಾರಣದಿಂದಾಗಿ ತನ್ನ ಪ್ರವೇಶಾತಿಯನ್ನು ಸ್ವಯಂ ರದ್ದುಗೊಳಿಸಿದ್ದಲ್ಲಿ ಅಥವಾ ವ್ಯಾಸಂಗವನ್ನು ಪೂರ್ಣಗೊಳಿಸಲು ಇಚ್ಚಿಸದಿದ್ದಲ್ಲಿ ಅಂತಹ ಅಭ್ಯರ್ಥಿಯು ಪಾವತಿಸಿದ ಶುಲ್ಕವನ್ನು ಮತ್ತು ಮೂಲ ದಾಖಲೆಗಳನ್ನು ಹಿಂದಿರುಗಿಸುವ ಬಗ್ಗೆ ಎಐಸಿಟಿಇ, ನವದೆಹಲಿ ಪ್ರಕಟಿಸಿರುವ ಪ್ರಕಟಣೆಯಲ್ಲಿನ (Advt.No.AICTE/Legal/04/(01)/2007) ಮಾರ್ಗಸೂಚಿಯನ್ನು ಎಲ್ಲಾ ವೃತ್ತಿಪರ ಶಿಕ್ಷಣ ಸಂಸ್ಥೆಗಳು ಕಡ್ಡಾಯವಾಗಿ ಪಾಲಿಸುವುದು. ಈ ಬಗ್ಗೆ ಸರ್ಕಾರದಲ್ಲಿ ದೂರುಗಳು ಸ್ವೀಕೃತವಾದಲ್ಲಿ ಅಂತಹ ಶಿಕ್ಷಣ ಸಂಸ್ಥೆಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಸೀಟು ಹಂಚಿಕೆಯ ಬಗ್ಗೆ ಪುನರ್ ಪರಿಶೀಲಿಸಲಾಗುವುದು.

S. Venkatesh

(ಎಸ್.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)

9/3/18

ಇವರಿಗೆ,

1) ಅಧ್ಯಕ್ಷರು/ಕಾರ್ಯದರ್ಶಿಗಳು, ರಾಜ್ಯದಲ್ಲಿನ ಎಲ್ಲಾ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ಆಡಳಿತ ಮಂಡಳಿಗಳು (ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ)
2) ಪ್ರಾಂಶುಪಾಲರು, ರಾಜ್ಯದಲ್ಲಿನ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಇಂಜಿನಿಯರಿಂಗ್ ಕಾಲೇಜುಗಳು (ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ)
3) ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು (ಈ ಸುತ್ತೋಲೆಯನ್ನು ಎಲ್ಲಾ ಶಿಕ್ಷಣ ಸಂಸ್ಥೆಗಳು ತಮ್ಮ ಅಂತರ್ಜಾಲದಲ್ಲಿ ಪ್ರಚುರಪಡಿಸುವ ಸಲುವಾಗಿ ಪ್ರಾಧಿಕಾರದ ಅಂತರ್ಜಾಲದಲ್ಲಿ ಪ್ರಚುರಪಡಿಸುವುದು)
4) ಕಾರ್ಯದರ್ಶಿಗಳು, ಕಾಮೆಡ್-ಕೆ, 17ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು
5) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು (ನಿರ್ದೇಶನಾಲಯದ ಅಂತರ್ಜಾಲದಲ್ಲಿ ಪ್ರಚುರಪಡಿಸಲು)